ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಜ್ಯದಲ್ಲಿ ವಸತಿ ರಹಿತರಿಗೆ ಹಾಗೂ ಬಡವರಿಗೆ ವಿವಿಧ ವಸತಿ ಯೋಜನೆಯಡಿ ಮನೆಗಳನ್ನು ನಿರ್ಮಿಸುವ ಕುರಿತು

ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭೆಯಿಂದಚುನಾಯಿತರಾದವರು):-

218 (235) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಹಾಗೂ ಬಡವರಿಗೆ ವಿವಿಧ ವಸತಿ ಯೋಜನೆಗಳಡಿ ಮನೆಗಳನ್ನು ಮಂಜೂರು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಯೋಜನೆಗಳಡಿ ಹಾಗೂ ಯಾವ ಯಾವ ನಿಗಮದಿಂದ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ;

(ಇ) ಮನೆ ಮಂಜೂರು ಮಾಡಲು ನಿಗಧಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ವಿವಿಧ ನಿಗಮಗಳಿಂದ ಮಂಜೂರಾಗಿರುವ ಒಟ್ಟು ಮನೆಗಳು ಎಷ್ಟು ; ಯೋಜನೆವಾರು/ನಿಗಮವಾರು/ಜಿಲ್ಲಾವಾರು/ ಭೌತಿಕ/ಆರ್ಥಿಕ ಪ್ರಗತಿಯ ವಿವರಗಳ ಪತ್ರೇಕ ಮಾಹಿತಿ ನೀಡುವುದು;

(ಉ) ಕಳೆದ 3 ವರ್ಷಗಳಲ್ಲಿ ಮಂಜೂರಾದ ಮನೆಗಳ ನಿರ್ಮಾಣದ ಕಾಮಗಾರಿ, ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳಲು ಬಾಕಿ ಇರುವ ಮನೆಗಳೆಷ್ಟು ; ಬಾಕಿ ಇರಲು ಕಾರಣಗಳೇನು ;

(ಊ) ಅನುದಾನದ ಕೊರತೆ ಇರುವ ಕಾರಣ ನೀಡಿ ಬ್ಲಾಕ್ ಮಾಡಿರುವ ಮನೆಗಳ ಸಂಖ್ಯೆ ಎಷ್ಟು ; ಬ್ಲಾಕ್ ಮಾಡಿರುವುದರಿಂದ ವಸತಿ ರಹಿತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು?